

ಅರುಣ ಪಿ. ಭಟ್ಟ

## ವಾರಭವಿಷ್ಯ: 27.01.2022ರಿಂದ 02.02.2022ರವರೆಗೆ




ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಸಾಧ್ಯತೆ ಇದೆ. ಉದ್ಯೋಗ ಹಾಗೂ ವೃತ್ತಿಗೆ ಸಂಬಂಧಿಸಿದಂತೆ ವಾರದ ಶುರುವಿನಿಂದಲೂ ಕೆಲವು ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಇತರ ಸ್ಥಳದಲ್ಲಿ ನಡೆಯುತ್ತಿರುವ ಕೆಲಸಗಳನ್ನು ನಿರ್ವಹಿಸಲು ನಿಮ್ಮನ್ನು ನಿಯೋಜನೆ ಮಾಡಬಹುದು. ಇದನ್ನು ಅವಕಾಶವಾಗಿ ಬಳಸಿಕೊಳ್ಳುವುದರಲ್ಲಿ ಬಿಡುವಿಲ್ಲದಂತೆ ಆಗುತ್ತದೆ. ಶುಭದಿನ 01. ಗಣಪತಿಗೆ ದೂರ್ವಾರ್ಚನೆ ಮಾಡಿಸಿರಿ.




ಕುಟುಂಬ ಬಗ್ಗೆ ಹೆಮ್ಮೆ ಪಡುವಂಥ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಆ ಕಾರಣಕ್ಕಾಗಿ ಹಲವು ಕೆಲಸ ಕಾರ್ಯಗಳನ್ನು ಪೂರೈಸಲಾಗುತ್ತದೆ. ನಿಮ್ಮ ಸಹೋದ್ಯೋಗಿಗಳ ಜತೆಗೆ ಇರುವ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನಿಸುತ್ತೀರಿ. ಶುಭದಿನ 28. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಹಣಕಾಸಿನ ಸಂಸ್ಥೆಗಳ ಜತೆಗೆ ಒಪ್ಪಂದ ಮಾಡಿಕೊಳ್ಳುವ ಸಾಧ್ಯತೆ. ನಿಮ್ಮ ವ್ಯಾಪಾರ– ವ್ಯವಹಾರಗಳನ್ನು ಬಲಪಡಿಸುವ ಸಲುವಾಗಿ ಹೆಚ್ಚು ಶ್ರಮ ಹಾಕಲಿದ್ದೀರಿ. ಇದರಿಂದ ನಿಮ್ಮಲ್ಲಿ ಉತ್ಸಾಹ ಮೂಡಲಿದೆ. ಆದರೆ ಈ ಬಲಪಡಿಸುವ ಪ್ರಕ್ರಿಯೆಯಲ್ಲಿ ಹೆಚ್ಚಿನ ಹಣವನ್ನು ಖರ್ಚು ಮಾಡಲಿದ್ದೀರಿ. ಹಣಕಾಸು ಸಂಸ್ಥೆಗಳಿಂದ ಬಂಡವಾಳ ತರಲಿದ್ದೀರಿ. ಶುಭದಿನ 27. ಚಾಮುಂಡಿ ಸ್ತುತಿ ವನದುರ್ಗಾ ಆರಾಧನೆ ಮಾಡಿರಿ.




ನಿಮ್ಮ ಮಕ್ಕಳ ಏಳ್ಗೆಯಿಂದ ಮನಸಿಗೆ ಸಂತಸವಾಗುತ್ತದೆ. ತಮ್ಮ ಪಾಲಿನ ಜವಾಬ್ದಾರಿಯನ್ನು ತುಂಬ ಅಚ್ಚುಕಟ್ಟಾಗಿ ಮಾಡುತ್ತಿರುವುದನ್ನು ಗಮನಿಸುತ್ತೀರಿ. ಆದಾಯ ಮೂಲಗಳು ಹೆಚ್ಚಿಸಿಕೊಳ್ಳುವುದರಲ್ಲಿ ಸಫಲರಾಗಲಿದ್ದು, ಅದರಿಂದ ಅನುಕೂಲ ದೊರೆಯುತ್ತದೆ. ಪ್ರೀತಿ ಪ್ರೇಮ ಸಂಬಂಧದಲ್ಲಿ ತೊಡಗಿರುವವರು ಸುಮಧುರವಾದ ಅನುಭವವನ್ನು ಪಡೆಯಲಿದ್ದೀರಿ. ಶುಭದಿನ 29. ಹನುಮಾನ್ ಚಾಲೀಸ್ ಪಠಿಸಿರಿ.




ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಜತೆಗೆ ಕೆಲಸ– ಕಾರ್ಯಗಳಲ್ಲಿ ಆಗುತ್ತಿರುವ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ನಿಮ್ಮ ಮೇಲಧಿಕಾರಿಗಳಿಗೆ ಕೆಲಸದ ಪ್ರಗತಿ ಬಗ್ಗೆ ವರದಿ ನೀಡುತ್ತೀರಿ. ಅವರ ಮೆಚ್ಚುಗೆಯನ್ನು ಪಡೆಯುತ್ತೀರಿ. ಪರಿಣಾಮಕಾರಿಯಾದ ಕಾರ್ಯ ವೈಖರಿಯನ್ನು ಮೆಚ್ಚಿಕೊಳ್ಳುತ್ತಾರೆ. ಶುಭದಿನ 25. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ತಕ್ಕಂತೆ ಈ ವಾರ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಮಾರುಕಟ್ಟೆಯ ಹಿಡಿತ ಸಾಧಿಸಲು ಸಾಧ್ಯವಾಗುತ್ತದೆ. ಆದರೆ ಇದಕ್ಕಾಗಿ ನೀವು ಹೆಚ್ಚಿನ ಶ್ರಮವನ್ನು ಹಾಕಬೇಕಾಗುತ್ತದೆ. ಕೆಲವು ಕೆಲಸಗಳನ್ನು ಪೂರ್ಣಗೊಳಿಸುವ ಸೋದರರು ಸಹಾಯಕ್ಕೆ ನಿಲ್ಲುತ್ತಾರೆ. ಧಾರ್ಮಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ಶುಭದಿನ 28. ಆದಿತ್ಯ ಹೃದಯ ಪಠಿಸಿರಿ.




ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಕುಟುಂಬದ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಅವುಗಳನ್ನು ತುಂಬ ಶ್ರದ್ಧೆಯಿಂದ ಅವರು ಮಾಡುತ್ತಾರೆ. ಈ ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಈ ವಿಚಾರದಲ್ಲಿ ಇನ್ನಷ್ಟು ಸಮಸ್ಯೆಗೆ ಎದುರಾಗಲಿದೆ. ಶುಭದಿನ 29. ಚಂಡಿ ಪಾರಾಯಣ ಮಾಡಿರಿ.




ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ನಿಮ್ಮ ಕೆಲಸ ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ಸಿಬ್ಬಂದಿಯ ನೇಮಕದಲ್ಲಿ ಕೆಲವು ಸವಾಲುಗಳನ್ನು ಎದುರಿಸಬೇಕಾಗುತ್ತದೆ. ವೈವಾಹಿಕ ಜೀವನವು ಸಂತಸದಾಯಕವಾಗಿರುತ್ತದೆ. ಶುಭದಿನ 30. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.




ಯೋಜನೆಗಳನ್ನು ವೇಗವಾಗಿ ಅನುಷ್ಠಾನಕ್ಕೆ ತರಲು ಉತ್ಸಾಹದಿಂದ ಕಾರ್ಯ ನಿರ್ವಹಿಸುತ್ತೀರಿ. ನಿಮ್ಮ ಕೆಲಸ ಪೂರ್ಣಗೊಳಿಸಲು ಅಗತ್ಯ ಇರುವ ಸಲಕರಣೆಗಳನ್ನು ಸ್ಥಳೀಯ ಮಾರುಕಟ್ಟೆಯಿಂದ ಖರೀದಿ ಮಾಡುವ ಸಾಧ್ಯತೆ ಇದೆ. ಆ ಮೂಲಕ ಬೇರೊಬ್ಬರ ಮೇಲಿನ ಅವಲಂಬನೆ ಕಡಿಮೆ ಆಗುತ್ತದೆ. ಆದರೆ ಸಲಕರಣೆಗಳ ಖರೀದಿಗೆ ಹೆಚ್ಚಿನ ಹಣ ಖರ್ಚಾಗಲಿದೆ. ಶುಭದಿನ 28. ವಿಷ್ಣು ಸಹಸ್ರನಾಮ ಪಠಿಸಿರಿ.




ಆದಾಯದಲ್ಲಿ ಹೆಚ್ಚಳ ಆಗುತ್ತದೆ. ಆ ಮೂಲಕ ಜೀವನ ಶೈಲಿ ಹಾಗೂ ಜೀವನ ಮಟ್ಟ ಉತ್ತಮಗೊಳ್ಳಲಿದೆ. ಈ ವಾರ ಕೆಲವು ಉಪಯುಕ್ತ ಸಂಪನ್ಮೂಲಗಳನ್ನು ಕ್ರೋಢೀಕರಿಸಲು ಸಾಧ್ಯವಾಗುತ್ತದೆ. ಕೆಲವು ಸಂಗತಿಗಳಲ್ಲಿ ವೇಗವನ್ನು ತರುವುದು ಸವಾಲಾಗಿ ಪರಿಣಮಿಸಲಿದೆ. ವಿವಿಧ ಆದಾಯ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಶುಭದಿನ 27. ಶಿವಕವಚ ಪಠಣ ಮಾಡಿರಿ.




ವೃತ್ತಿಪರ ಬದುಕಿನಲ್ಲಿ ಹಲವು ಅವಕಾಶಗಳು ನಿಮಗೆ ದೊರೆಯಲಿವೆ. ನಿಮ್ಮ ಉತ್ಸಾಹ ಹೆಚ್ಚಾಗಲಿದೆ. ಈ ಹಿಂದೆ ನಿಮ್ಮನ್ನು ಮಾನಸಿಕವಾಗಿ ಚಿಂತೆಗೆ ಈಡು ಮಾಡಿದ್ದ ವಾತಾವರಣವು ಕರಗಲಿದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅನುಕೂಲಕರವಾಗಿ ಪರಿಣಮಿಸಲಿದೆ. ಆಹಾರ ಪಥ್ಯವನ್ನು ಅನುಸರಿಸಲಿದ್ದೀರಿ. ಉದ್ಯೋಗದಲ್ಲಿ ಬಡ್ತಿ ಸಿಗುವ ಸಾಧ್ಯತೆ ಇದೆ. ಶುಭದಿನ 29. ರಾಘವೇಂದ್ರ ಸ್ವಾಮಿ ಭಜನೆ ಮಾಡಿರಿ.




ಈ ವಾರ ನಿಮ್ಮ ಧೈರ್ಯ ಹೆಚ್ಚಲಿದೆ. ಈ ಹಿಂದೆ ಪೂರ್ಣಗೊಳಿಸಲು ಸಾಧ್ಯವಾಗದಂಥ ಹಲವು ಕೆಲಸ– ಕಾರ್ಯಗಳನ್ನು ಪೂರ್ಣಗೊಳಿಸಲು ಸಂಪೂರ್ಣ ಮಾಡಲು ಆಗುತ್ತದೆ. ವಾರದ ಮೊದಲ ಭಾಗವು ಆರೋಗ್ಯದ ಮೇಲೆ ಅಡ್ಡ ಪರಿಣಾಮ ಬೀರುತ್ತದೆ. ಇದರಿಂದ ನಿಮಗೆ ಚಿಂತೆ ಉಂಟಾಗುತ್ತದೆ. ವಾರದ ದ್ವಿತೀಯಾರ್ಧದಲ್ಲಿ ಆರೋಗ್ಯದಲ್ಲಿ ಚೇತರಿಕೆ ಕಾಣುತ್ತದೆ. ಶುಭದಿನ 30. ಕಾರ್ತಿಕೇಯ ಸ್ತೋತ್ರ ಪಠಣ ಮಾಡಿರಿ.